# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103
ದೂರವಾಣಿ: 0816–2254546, 0816–2255596, 0816–2255597 ಫ್ಯಾಕ್ಸ್: 0816–2270719

**ಸಂಖ್ಯೆ:ತು.ವಿ.ಪ.ವಿ.:2024–25/** **ದಿನಾಂಕ:10.06.2024**

## ದರಪಟ್ಟಿ ಆಹ್ವಾನ (ವಿ.ವಿ ವೆಬ್ ಸೈಟ್ ಮುಖಾಂತರ)

**ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಅಗತ್ಯವಿರುವ "ಕಲರ್ ಪ್ರಿಂಟರ್"ಅನ್ನು ಸರಬರಾಜು ಪಡೆಯಲು ದರಪಟ್ಟಿಯನ್ನು ಆಹ್ವಾನಿಸಿರುವ ಕುರಿತು.**

**ಉಲ್ಲೇಖ:** 1. ಕುಲಸಚಿವರು, ಪರೀಕ್ಷಾ ವಿಭಾಗ, ತು.ವಿ.ತು ಇವರ ಪತ್ರ ದಿನಾಂಕ:01.01.2024
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:18.05.2024

*****

ತುಮಕೂರು ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಕಲರ್ ಪ್ರಿಂಟರ್ ಅನ್ನು ಸರಬರಾಜು ಪಡೆಯುವ ಸಂಬಂಧ ಕೆಳಕಂಡ ಷರತ್ತುಗಳಿಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದ್ದು, **ಕಲರ್ ಪ್ರಿಂಟರ್‌ನ ವೈಶಿಷ್ಟತೆಗಳು ಈ ಕೆಳಕಂಡಂತಿವೆ.**

| Sl. No. | Printer Name & Specifications | Quantity | Price Per Unit (including tax) |
|---|---|---|---|
| 01 | **Color Printer**<br>a) Speed – 36 copies per minute B/W & Color (A4 Size).<br>b) Panel size – 10.1" LCD Color Touch Panel<br>c) Paper size – A5, A3, SRA3, 12X18, 12X47 size.<br>d) Warm up time (Mono/Color) – less than 11 sec<br>e) Fist page out time (Mono/Color) – 5 Sec or less<br>f) Printable paper weight 52-300 GSM<br>g) Paper Trays – 500 x 2 sheets cassettes.<br>h) Bypass Capacity – 150 sheets<br>i) Print resolution - - 1200 x 1200dpi.<br>j) Processor – Quad Core 1.6Ghz processor<br>k) Memory 8192 MB RAM<br>l) HDD – 256GB SSD<br>m) Multiple coping 1-9999.<br>n) Automatic/Manual Quality adjustment<br>o) Duplex printing<br>p) Network Printing, Color Scanning, Scan to USB, NFC, Mobile Print.<br>q) PDL : PCL6, PCL5C, PS3, XPS. | 01 | |

**ಷರತ್ತುಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ಪರೀಕ್ಷಾ ವಿಭಾಗಕ್ಕೆ ಕಲರ್ ಪ್ರಿಂಟರ್ ಸರಬರಾಜು ಮಾಡಲು ದರಪಟ್ಟಿ"** ಎಂದು ನಮೂದಿಸತಕ್ಕದ್ದು.
2. **ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು–572 103,** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 17.06.2024 ಅಪರಾಹ್ನ 5.00 ಗಂಟೆ**

(ಪು.ತಿ.ನೋ)

4. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
5. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.
6. ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
7. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮೊತ್ತ ಮತ್ತು ಸಾಗಾಣಿಕೆ ಮೊತ್ತವನ್ನು ಒಳಗೊಂಡಿರಬೇಕು.
8. ದರಪಟ್ಟಿಯಲ್ಲಿ ನಮೂದಿಸಿರುವ ಉಪಕರಣಗಳ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
9. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
11. ತಮ್ಮ ಸಂಸ್ಥೆಯು ಸರಬರಾಜು ಮಾಡಲು ಉದ್ದೇಶಿಸಿರುವ ಪ್ರಿಂಟರ್‌ಗಳ ಸಂರಚನೆಗಳಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಗಳ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
12. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
13. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
14. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
15. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

ಉಪಕುಲಸಚಿವರು
ಖರೀದಿ ಕೋಶ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಉಪಕುಲಸಚಿವರು, ಪರೀಕ್ಷಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.